Akashvani: Bangalore
National Bulletin In Kannada
04.04.2026: 7.35AM

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

04.04.2026: 7.35AM

********

**ಮುಖ್ಯಾಂಶಗಳು :**

1. ನಾಲ್ಕು ರಾಜ್ಯ ಹಾಗೂ ಒಂದು ಕೇಂದ್ರಾಡಳಿತ ಪ್ರದೇಶದ ವಿಧಾನಸಭಾ ಚುನಾವಣೆಗೆ ರಾಜಕೀಯ ಪಕ್ಷಗಳಿಂದ ಚುನಾವಣಾ ಪ್ರಚಾರ ಬಿರುಸು
2. ಮುಕ್ತ, ನ್ಯಾಯಸಮ್ಮತ ಮತ್ತು ಪಾರದರ್ಶಕ ಚುನಾವಣೆ ಖಚಿತಪಡಿಸುವಂತೆ ಅಧಿಕಾರಿಗಳಿಗೆ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ನಿರ್ದೇಶನ
3. ಅಫ್ಘಾನಿಸ್ತಾನದಲ್ಲಿ ೫.೮ ತೀವ್ರತೆಯ ಭೂಕಂಪನ; ದೆಹಲಿ, ಚಂಡಿಗಢ, ಪಂಜಾಬ್, ಜಮ್ಮು-ಕಾಶ್ಮೀರದಲ್ಲೂ ಕಂಪನದ ಅನುಭವ
4. ಏಷ್ಯನ್ ಬಾಕ್ಸಿಂಗ್ ಚಾಂಪಿಯನ್‌ಶಿಪ್; ಭಾರತಕ್ಕೆ ಮೂರು ಪದಕ ಖಚಿತ
5. ಐಪಿಎಲ್ ಟಿ-೨೦ ಕ್ರಿಕೆಟ್; ಚೆನ್ನೈ ಸೂಪರ್ ಕಿಂಗ್ಸ್ ವಿರುದ್ಧ ಪಂಜಾಬ್ ಕಿಂಗ್ಸ್ ತಂಡಕ್ಕೆ ಐದು ವಿಕೆಟ್ ಜಯ

*********

ನಾಲ್ಕು ರಾಜ್ಯ ಹಾಗೂ ಒಂದು ಕೇಂದ್ರಾಡಳಿತ ಪ್ರದೇಶದಲ್ಲಿ ಮುಂಬರುವ ವಿಧಾನಸಭಾ ಚುನಾವಣೆಗೆ ಚುನಾವಣಾ ಪ್ರಚಾರ ಬಿರುಸುಗೊಂಡಿದೆ. ಹಿರಿಯ ಬಿಜೆಪಿ ನಾಯಕ ಹಾಗೂ ಪ್ರಧಾನಿ ನರೇಂದ್ರ ಮೋದಿ ನಿನ್ನೆ ಸಂಜೆ ಪುದುಚೇರಿಯಲ್ಲಿ ಎನ್‌ಡಿಎ ಅಭ್ಯರ್ಥಿಗಳ ಪರವಾಗಿ ರೋಡ್ ಶೋ ನಡೆಸಿ, ಮತಯಾಚಿಸಿದರು. ಇಂದು ಪ್ರಧಾನಿ ಕೇರಳಗೆ ಭೇಟಿ ನೀಡಲಿದ್ದು, ಚಂಗನಸ್ಸೆರಿ ಮತ್ತು ತಿರುವಲ್ಲಾದಲ್ಲಿ ಚುನಾವಣಾ ಸಭೆಗಳನ್ನುದ್ದೇಶಿಸಿ ಮಾತನಾಡಲಿದ್ದಾರೆ. ಸಂಜೆ ತಿರುವನಂತಪುರಂನಲ್ಲಿ ರೋಡ್ ಶೋ ನಡೆಸಲಿದ್ದಾರೆ. ಮತ್ತೊಂದೆಡೆ ಕಾಂಗ್ರೆಸ್ ಮುಖಂಡ ಹಾಗೂ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಅಲಪ್ಪುಳದಲ್ಲಿ ಯುಡಿಎಫ್ ಅಭ್ಯರ್ಥಿಪರ ಪ್ರಚಾರ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ಕುನ್ನತುನಾಡ್ ಮತ್ತು ಕಟಪ್ಪನಾದಲ್ಲಿ ನಡೆಯುವ ಕಾರ್ಯಕ್ರಮಗಳಲ್ಲಿಯೂ ಅವರು ಭಾಗವಹಿಸಲಿದ್ದಾರೆ. ಸಿಪಿಎಂ ಪಕ್ಷದ ಪ್ರಧಾನ

ಕಾರ್ಯದರ್ಶಿ ಎಂ.ಎ. ಬೇಬಿ ಕೊಟ್ಟಾಯಮ್‌ನಲ್ಲಿ ನಡೆಯುವ ಹಲವು ಎಲ್‌ಡಿಎಫ್ ಅಭ್ಯರ್ಥಿ ಪರ ಪ್ರಚಾರ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಲಿದ್ದಾರೆ.

*********

ಅಸ್ಸಾಂ, ಕೇರಳ, ಪುದುಚೇರಿ, ತಮಿಳುನಾಡು ಮತ್ತು ಪಶ್ಚಿಮಬಂಗಾಳದಲ್ಲಿ ವಿಧಾನಸಭಾ ಚುನಾವಣಾ ಹಿನ್ನೆಲೆಯಲ್ಲಿ ಮತದಾನದ ದಿನದಂದು ಎಲ್ಲಾ ಮತದಾರರಿಗೆ ವೇತನಸಹಿತ ರಜೆ ನೀಡುವಂತೆ ಚುನಾವಣಾ ಆಯೋಗ ರಾಜ್ಯ ಮತ್ತು ಕೇಂದ್ರಾಡಳಿತ ಪ್ರದೇಶಗಳಿಗ ನಿರ್ದೇಶನ ನೀಡಿದೆ. ದಿನಗೂಲಿ ಮತ್ತು ತಾತ್ಕಾಲಿಕ ಕಾರ್ಮಿಕರು ಸೇರಿದಂತೆ ಎಲ್ಲಾ ಅರ್ಹಮತದಾರರಿಗೆ ವೇತನ ಕಡಿತವಿಲ್ಲದೆ, ರಜೆ ನೀಡುಬೇಕು ಎಂದು ಆಯೋಗ ಸ್ಪಷ್ಟಪಡಿಸಿದೆ.

*********

ಪಶ್ಚಿಮಬಂಗಾಳದಲ್ಲಿ ಮುಕ್ತ, ನ್ಯಾಯಸಮ್ಮತ ಮತ್ತು ಪಾರದರ್ಶಕ ವಿಧಾನಸಭಾ ಚುನಾವಣೆ ನಡೆಸುವಂತೆ ಕೇಂದ್ರ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್‌ಕುಮಾರ್ ಹಾಗೂ ಚುನಾವಣಾ ಆಯುಕ್ತರಾದ ಸುಖ್‌ಬೀರ್ ಸಿಂಗ್ ಸಂಧು ಮತ್ತು ಡಾ. ವಿವೇಕ್ ಜೋಶಿ ಅವರು, ರಾಜ್ಯದ ಉನ್ನತ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ. ಪಶ್ಚಿಮ ಬಂಗಾಳದ ಮುಖ್ಯ ಕಾರ್ಯದರ್ಶಿ, ಪೊಲೀಸ್ ಮಹಾ ನಿರ್ದೇಶಕರು, ಕೋಲ್ಕತ್ತಾ ಪೊಲೀಸ್ ಆಯುಕ್ತರು ಸೇರಿದಂತೆ ಜಿಲ್ಲಾ ಮ್ಯಾಜಿಸ್ಟ್ರೇಟ್‌ಗಳು ಮತ್ತು ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಈ ನಿರ್ದೇಶನ ನೀಡಲಾಗಿದೆ. ಚುನಾವಣಾ ಪ್ರಕ್ರಿಯೆ ಯಾವುದೇ ಆತಂಕ, ಹಿಂಸಾಚಾರ, ಬೆದರಿಕೆ ಅಥವಾ ಆಮಿಷಗಳಿಂದ ಮುಕ್ತವಾಗಿರಬೇಕು ಎಂದು ಆಯೋಗ ಸ್ಪಷ್ಟಪಡಿಸಿದೆ. ಮತದಾರರು ಯಾವುದೇ ಆತಂಕವಿಲ್ಲದೆ ಮತದಾನ ಮಾಡಲು ಪೂರಕ ವಾತಾವರಣ ನಿರ್ಮಿಸಬೇಕು ಮತ್ತು ಮತಗಟ್ಟೆ ವಶಪಡಿಸಿಕೊಳ್ಳುವಿಕೆ ಅಥವಾ ಮತದಾನಕ್ಕೆ ಅಡ್ಡಪಡಿಸುವಂತಹ ಯಾವುದೇ ಅಕ್ರಮಗಳಿಗೆ ಅವಕಾಶ ನೀಡಬಾರದು ಎಂದು ಅಧಿಕಾರಿಗಳಿಗೆ ಸೂಚಿಸಲಾಗಿದೆ. ಅಕ್ರಮ ಚಟುವಟಿಕೆ ವಿರುದ್ಧ ಶೂನ್ಯ ಸಹಿಷ್ಣುತಾ ನೀತಿಯನ್ನು ಅನುಸರಿಸುವಂತೆ ನಿರ್ದೇಶನ ನೀಡಲಾಗಿದೆ.

*********

ಪಶ್ಚಿಮ ಬಂಗಾಳದ ಮಾಲ್ಡಾ ಜಿಲ್ಲೆಯ ಕಾಲಿಯಾಚೋಕ್ ಘಟನೆಗೆ ಸಂಬಂಧಿಸಿದಂತೆ ಪ್ರಮುಖ ಆರೋಪಿಗಳಾದ ಮೊಫಕ್ಕೆರುಲ್ ಇಸ್ಲಾಮ್ ಮತ್ತು ಅಕ್ರಮುಲ್ ಬಾಗ್ನಿ ಅವರನ್ನು ನ್ಯಾಯಾಲಯ ಪೊಲೀಸ್ ವಶಕ್ಕೆ ಒಪ್ಪಿಸಿದೆ. ಬಿಡಿಒ ಕಚೇರಿಗೆ ಮುತ್ತಿಗೆ ಹಾಕಿದ ಗುಂಪನ್ನು ಪ್ರಚೋದಿಸಿದ

ಆರೋಪದ ಮೇಲೆ ಬಂಧಿತರಾಗಿರುವ ಮೊಫಕ್ಕೆರುಲ್‌ಗೆ ೧೪ ದಿನ ಮತ್ತು ಅಕ್ರಮುಲ್‌ಗೆ ಆರು ದಿನಗಳ ಕಾಲ ಪೊಲೀಸ್ ಕಸ್ಟಡಿ ವಿಧಿಸಿ ನ್ಯಾಯಾಲಯ ಆದೇಶಿಸಿದೆ. ಮತದಾರರ ಪಟ್ಟಿಗೆ ಹೆಸರು ಸೇರಿಸುವಂತೆ ಒತ್ತಾಯಿಸಿ ಪ್ರತಿಭಟನೆ ನಡೆಸುತ್ತಿದ್ದ ಗುಂಪು ಸುಮಾರು ೯ ಗಂಟೆಗಳ ಕಾಲ ನ್ಯಾಯಾಂಗ ಅಧಿಕಾರಿಗಳನ್ನು ಕಚೇರಿಯೊಳಗೆ ಆಹಾರ ಮತ್ತು ನೀರು ನೀಡದೆ ಕೂಡಿಹಾಕಿತ್ತು.

*********

ದೇಶದಲ್ಲಿ ಪೆಟ್ರೋಲ್, ಡೀಸೆಲ್ ಮತ್ತು ಎಲ್‌ಪಿಜಿ ಲಭ್ಯತೆಯನ್ನು ಖಚಿತಪಡಿಸಿಕೊಳ್ಳಲು ಎಲ್ಲಾ ಪ್ರಯತ್ನಗಳನ್ನು ಮಾಡಲಾಗುತ್ತಿದೆ ಎಂದು ಕೇಂದ್ರ ಸರ್ಕಾರ ಜನತೆಗೆ ಭರವಸೆ ನೀಡಿದೆ. ಇಂಧನಕ್ಕಾಗಿ ಆತಂಕದ ಖರೀದಿ ಮಾಡದಿರಲು ಹಾಗೂ ಅನಗತ್ಯ ಎಲ್‌ಪಿಜಿ ಬುಕ್ಕಿಂಗ್ ಮಾಡದಿರಲು ನಾಗರಿಕರಿಗೆ ಸಲಹೆ ನೀಡಲಾಗಿದೆ. ಇಂಡಿಯನ್ ಆಯಿಲ್ ಸಂಸ್ಥೆ ದಿನಕ್ಕೆ ೨೮ ಲಕ್ಷ ಎಲ್‌ಪಿಜಿ ಸಿಲಿಂಡರ್‌ಗಳನ್ನು ವಿತರಿಸುತ್ತಿದ್ದು, ಪೂರೈಕೆಯಲ್ಲಿ ಯಾವುದೇ ವ್ಯತ್ಯಯವಾಗಿಲ್ಲ ಎಂದು ತಿಳಿಸಿದೆ.

*********

ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಅವರು ಇಂದು ಬಿಹಾರಕ್ಕೆ ಒಂದು ದಿನದ ಭೇಟಿ ನೀಡಲಿದ್ದು, ಮೋತಿಹಾರಿಯ ಮಹಾತ್ಮ ಗಾಂಧಿ ಕೇಂದ್ರೀಯ ವಿಶ್ವವಿದ್ಯಾಲಯದ ೩ನೇ ಘಟಿಕೋತ್ಸವದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ. ಭೇಟಿಯ ಸಮಯದಲ್ಲಿ ಉಪರಾಷ್ಟ್ರಪತಿಗಳು ಪಶ್ಚಿಮ ಚಂಪಾರಣ್‌ನಲ್ಲಿರುವ ಭಿತಿಹರ್ವಾ ಗಾಂಧಿ ಆಶ್ರಮಕ್ಕೂ ಭೇಟಿ ನೀಡಲಿದ್ದಾರೆ.

*********

ಅಫ್ಘಾನಿಸ್ತಾನದ ಹಿಂದೂಕುಶ್ ಪ್ರದೇಶದಲ್ಲಿ ಕಳೆದ ರಾತ್ರಿ ಸಂಭವಿಸಿದ ೫.೮ ತೀವ್ರತೆಯ ಪ್ರಬಲ ಭೂಕಂಪಕ್ಕೆ ಕನಿಷ್ಠ ೮ ಜನರು ಪ್ರಾಣ ಕಳೆದುಕೊಂಡಿದ್ದಾರೆ. ಭೂಮಿಯ ಸುಮಾರು ೧೮೧ ಕಿಲೋಮೀಟರ್‌ಗಳಷ್ಟು ಆಳದಲ್ಲಿ ಕೇಂದ್ರಿತವಾಗಿದ್ದ ಈ ಭೂಕಂಪನದ ಅನುಭವ ಅಫ್ಘಾನಿಸ್ತಾನದ ಜೊತೆಗೆ, ಪಾಕಿಸ್ತಾನದ ಹಲವು ಭಾಗಗಳಲ್ಲೂ ಕಂಡುಬಂದಿದೆ. ದೆಹಲಿ, ರಾಷ್ಟ್ರ ರಾಜಧಾನಿ ಪ್ರದೇಶ, ನೋಯ್ಡಾ, ಚಂಡಿಗಢ, ಪಂಜಾಬ್‌ನ ಲೂಧಿಯಾನ ಮತ್ತು ಜಮ್ಮು-ಕಾಶ್ಮೀರದ ವಿವಿಧೆಡೆ ರಾತ್ರಿ ಸುಮಾರು ೯.೫೦ಕ್ಕೆ ಭೂಕಂಪನದ ಅನುಭವವಾಗಿದೆ.

*********

ಹಾರ್ಮುಜ್ ಜಲಸಂಧಿಯಲ್ಲಿ ಇರಾನ್ ನಡೆಸುತ್ತಿರುವ ದಾಳಿಗಳಿಂದ ಹಡಗು ಸಾಗಾಣೆಯನ್ನು ರಕ್ಷಿಸಲು ರಕ್ಷಣಾತ್ಮಕ ಬಲವನ್ನು ಬಳಸುವ ಕುರಿತಾದ ನಿರ್ಣಯದ ಮೇಲಿನ ಮತದಾನವನ್ನು ವಿಶ್ವಸಂಸ್ಥೆ ಭದ್ರತಾ ಮಂಡಳಿ ಮುಂದೂಡಿದೆ. ಬಹ್ರೇನ್ ದೇಶ ಮಂಡಿಸಿದ್ದ ಈ ಕರಡು ನಿರ್ಣಯದ ಮೇಲೆ ೧೫ ಸದಸ್ಯ ರಾಷ್ಟ್ರಗಳ ಭದ್ರತಾ ಮಂಡಳಿ ನಿನ್ನೆ ರಾತ್ರಿ ಮತದಾನ ಮಾಡಬೇಕಿತ್ತು. ಆದರೆ, ಶುಭ ಶುಕ್ರವಾರ ಪ್ರಯುಕ್ತ ವಿಶ್ವಸಂಸ್ಥೆ ಸಾರ್ವಜನಿಕ ರಜೆ ಘೋಷಿಸಿದ್ದರಿಂದ ಈ ವೇಳಾಪಟ್ಟಿಯಲ್ಲಿ ಬದಲಾವಣೆ ಮಾಡಲಾಗಿದೆ. ಈ ತಿಂಗಳ ಅವಧಿಗೆ ಗಲ್ಫ್ ರಾಷ್ಟ್ರವಾದ ಬಹ್ರೇನ್ ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ಅಧ್ಯಕ್ಷತೆಯನ್ನು ವಹಿಸಿಕೊಂಡಿದೆ. ಮಂಡಿಸಿರುವ ನಿರ್ಣಯದ ಬಗ್ಗೆ ಮತದಾನದ ಮುಂದಿನ ದಿನಾಂಕವನ್ನು ಇದುವರೆಗೆ ಪ್ರಕಟಿಸಲಾಗಿಲ್ಲ.

*********

೨೦೨೬ನೇ ಏಷ್ಯನ್ ಬಾಕ್ಸಿಂಗ್ ಚಾಂಪಿಯನಶಿಪ್‌ನಲ್ಲಿ ಭಾರತಕ್ಕೆ ೩ ಪದಕ ಖಚಿತವಾಗಿದೆ. ಭಾರತದ ಬಾಕ್ಸರ್‌ಗಳಾದ ನಿಖಾತ ಝುರೀನ್, ಪ್ರಿಯಾ ಮತ್ತು ಪ್ರೀತಿ ನಿನ್ನೆ ನಡೆದ ಪಂದ್ಯಗಳಲ್ಲಿ ಜಯ ದಾಖಲಿಸುವ ಮೂಲಕ ಮಂಗೋಲಿಯಾದ ಉಲ್ಲಾನಬಾತರ್‌ನಲ್ಲಿ ನಡೆಯಲಿರುವ ಸೆಮಿಫೈನಲ್‌ಗೆ ಅರ್ಹತೆ ಗಿಟ್ಟಿಸಿಕೊಂಡಿದ್ದಾರೆ. ೫೧ ಕೆ.ಜಿ. ತೂಕದ ಮಹಿಳಾ ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ನಿಖತ್  ಝುರೀನ್ ಫಿಲಿಪ್ಪೀನ್ಸ್ ಪಟು ಕ್ಸಿಯಾನ್ ಬಗುಹಿನ ವಿರುದ್ಧ ಜಯ ಸಾಧಿಸಿದರು.  ಸೆಮಿಫೈನಲ್‌ನಲ್ಲಿ ೨೦೨೪ ರ ಪ್ಯಾರಿಸ್ ಒಲಿಂಪಿಕ್ ನಲ್ಲಿ ಚಿನ್ನದ ಪದಕ ವಿಜೇತೆ ಚೀನಾದ ವು ಯು ಅವರನ್ನು ಝುರೀನ್ ಎದುರಿಸಲಿದ್ದಾರೆ. ೬೦ ಕೆಜಿ ತೂಕದ ಮಹಿಳಾ ವಿಭಾಗದ ಪಂದ್ಯಾವಳಿಯಲ್ಲಿ ಪ್ರಿಯಾ ೪-೧ ಅಂಕ ಗಳಿಸುವ ಮೂಲಕ ಚೀನಾದ ಚೆಂಗಯು ಯಾಂಗ್ ಅವರ ವಿರುದ್ಧ ಜಯ ಸಾಧಿಸಿದರು. ಸೆಮಿಫೈನಲ್ ಪಂದ್ಯದಲ್ಲಿ ಪ್ರಿಯಾ ಮಂಗೋಲಿಯಾದ ನಾಮುನ್ ಮೊಂಖೋರ್ ವಿರುದ್ಧ ಸೆಣಸಲಿದ್ದಾರೆ. ೫೪ ಕೆಜಿ ತೂಕದ ಮಹಿಳಾ ವಿಭಾಗದಲ್ಲಿ ಪ್ರೀತಿ ಪವಾರ್ ಎದುರಾಳಿ ಮಂಗೋಲಿಯಾದ ಬಾಕ್ಸರ್ ಎಂಖಜಾರ್ಗಲ್ ಮುಂಗುತ್ಸೇಸೇಂಗ್ ಅವರ ವಿರುದ್ಧ ೫-೦ ಅಂಕಗಳ ಜಯ ಸಾಧಿಸಿದ್ದು ಸೆಮಿಫೈನಲ್‌ನಲ್ಲಿ ದಕ್ಷಿಣ ಕೋರಿಯಾದ ಇಮ್ ಆಯಿಜೀ ಅವರನ್ನು ಎದುರಿಸಲಿದ್ದಾರೆ.

*********

ಚೆನ್ನೈನ ಎಂ.ಎ. ಚಿದಂಬರಂ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಪಂಜಾಬ್ ಕಿಂಗ್ಸ್ ತಂಡ, ಚೆನ್ನೈ ಸೂಪರ್ ಕಿಂಗ್ಸ್ ತಂಡವನ್ನು ೫ ವಿಕೆಟ್‌ಗಳಿಂದ

ಮಣಿಸಿದೆ. ಚೆನ್ನೈ ನೀಡಿದ್ದ ೨೧೦ ರನ್‌ಗಳ ಗುರಿಯನ್ನು ಕೇವಲ ೧೮.೪ ಓವರ್‌ಗಳಲ್ಲಿ ಸಾಧಿಸಿ, ೫ ವಿಕೆಟ್ ನಷ್ಟಕ್ಕೆ ಪಂಜಾಬ್ ಕಿಂಗ್ಸ್ ಗೆಲುವು ತನ್ನದಾಗಿಸಿಕೊಂಡಿತು. ಚೆನ್ನೈ ಸೂಪರ್ ಕಿಂಗ್ಸ್ ತಂಡಕ್ಕೆ ತನ್ನದೇ ಕ್ರೀಡಾಂಗಣದಲ್ಲಿ ಇದು ಸತತ ಆರನೇ ಸೋಲಾಗಿದೆ ಹಾಗೂ ಈ ಆವೃತ್ತಿಯಲ್ಲಿ ಆಡಿರುವ ಮೊದಲೆರಡೂ ಪಂದ್ಯಗಳಲ್ಲಿ ಸೋಲನುಭವಿಸಿದೆ. ಇಂದು ವಾರಾಂತ್ಯವಾಗಿರುವ ಹಿನ್ನೆಲೆಯಲ್ಲಿ ಎರಡು ಪಂದ್ಯಗಳು ನಡೆಯಲಿದ್ದು, ದೆಹಲಿಯ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ನಡೆಯಲಿರುವ ದಿನದ ಮೊದಲ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ಹಾಗೂ ಮುಂಬೈ ಇಂಡಿಯನ್ಸ್ ತಂಡಗಳು ಮುಖಾಮುಖಿಯಾಗಲಿವೆ. ಈ ಪಂದ್ಯ ಅಪರಾಹ್ನ ೩.೩೦ಕ್ಕೆ ಆರಂಭವಾಗಲಿದೆ. ರಾತ್ರಿ ೭.೩೦ಕ್ಕೆ ಅಹಮದಾಬಾದ್ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆಯಲಿರುವ ದಿನದ ಎರಡನೇ ಪಂದ್ಯದಲ್ಲಿ ಗುಜರಾತ್ ಟೈಟನ್ಸ್ ತಂಡ ರಾಜಸ್ತಾನ್ ರಾಯಲ್ಸ್ ತಂಡವನ್ನು ಎದುರಿಸಲಿದೆ.

*********

ನಿನ್ನೆ ಮಾಲ್ಡೀವ್ಸ್‌ನ ರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಡೆದ SAFF 20೨೦ ವರ್ಷದೊಳಗಿನ ಪುರುಷರ ಫುಟ್ಬಾಲ್ ಚಾಂಪಿಯನ್‌ಶಿಪ್‌ನ ಫೈನಲ್‌ನಲ್ಲಿ, ಭಾರತ ತಂಡ, ಬಾಂಗ್ಲಾದೇಶದ ವಿರುದ್ಧ ಪೆನಾಲ್ಟಿ ಶೂಟೌಟ್‌ನಲ್ಲಿ ೩-೪ ಅಂತರದಿಂದ ಪರಾಭವಗೊಂಡಿತು. ಇದು ಬಾಂಗ್ಲಾದೇಶದ ಎರಡನೇ SAFF 20 ಅಂಡರ್-೨೦ ಚಾಂಪಿಯನ್‌ಶಿಪ್ ಪ್ರಶಸ್ತಿಯಾಗಿದೆ.

*********

ನವದೆಹಲಿಯ ಜವಾಹರಲಾಲ್ ನೆಹರು ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಇಂಡಿಯನ್ ಸೂಪರ್ ಲೀಗ್ ೨೦೨೫-೨೬ ಫುಟ್ಬಾಲ್ ಟೂರ್ನಿಯಲ್ಲಿ ಪಂಜಾಬ್ ಫುಟ್ಬಾಲ್ ಕ್ಲಬ್ ೨-೧ ಗೋಲುಗಳಿಂದ ಮೊಹಮ್ಮದನ್ ಸ್ಪೋರ್ಟಿಂಗ್ ಕ್ಲಬ್ ಅನ್ನು ಸೋಲಿಸಿತು. ಈ ಗೆಲುವಿನೊಂದಿಗೆ, ಪಂಜಾಬ್ ಫುಟ್ಬಾಲ್ ಕ್ಲಬ್, ೧೧ ಅಂಕಗಳೊಂದಿಗೆ ಅಂಕಪಟ್ಟಿಯಲ್ಲಿ ಐದನೇ ಸ್ಥಾನಕ್ಕೆ ಏರಿತು.

*****END****